**ಅತಿಥಿ ಉಪನ್ಯಾಸಕರುಗಳ ಆಯ್ಕೆ ಪ್ರಕ್ರಿಯೆಯಲ್ಲಿ ಕಾಲೇಜಿನ ಪ್ರಾಂಶುಪಾಲರು/ಆಯ್ಕೆ ಸಮಿತಿಯು ಅನುಸರಿಸಬೇಕಾದ ಮಾನದಂಡಗಳು;**

(1) ಆನ್‌ಲೈನ್ ಮೂಲಕ ಪಡೆದ ಅರ್ಜಿಗಳಲ್ಲಿನ ವಿವರಗಳನ್ನು ಆಧರಿಸಿ, ವಿದ್ಯಾರ್ಹತೆ ಮತ್ತು ಸೇವಾ ಅನುಭವವನ್ನು ಪರಿಗಣಿಸಲು ಈ ಕೆಳಕಂಡ ಮಾರ್ಗಸೂಚಿಗಳನ್ನು ಅನುಸರಿಸಿ ಪ್ರತಿಭಾ ಪಟ್ಟಿಯನ್ನು (Merit List) ಸಿದ್ಧಪಡಿಸಿಕೊಂಡು ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವುದು.

| ಕ್ರಮ ಸಂಖ್ಯೆ | ವಿದ್ಯಾರ್ಹತೆ | ಗರಿಷ್ಠ ಅಂಕಗಳು |
|---|---|---|
| 1) | **ಸಾಮಾನ್ಯ ವಿದ್ಯಾರ್ಹತೆ:**<br>ಅಭ್ಯರ್ಥಿಯು ಎರಡು ವರ್ಷ ಸ್ನಾತಕೋತ್ತರ ಪದವಿಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ 35%ನ್ನು ಗಣನೆಗೆ ತೆಗೆದುಕೊಳ್ಳುವುದು.<br>(ಉದಾ: ಅಭ್ಯರ್ಥಿಯು ಸ್ನಾತಕೋತ್ತರ ಪದವಿಯಲ್ಲಿ ಶೇಕಡ 60 ಅಂಕ ಪಡೆದಿದ್ದಲ್ಲಿ ಅದರ ಶೇಕಡ 35ರಷ್ಟು ಭಾಗವನ್ನು ಅಂದರೆ 21 ಅಂಕಗಳು ಎಂಬುದಾಗಿ ಗಣನೆಗೆ ತೆಗೆದುಕೊಳ್ಳುವುದು). | 35 |
| 2) | (1) ಪಿಹೆಚ್.ಡಿ ವಿದ್ಯಾರ್ಹತೆ ಪಡೆದಿದ್ದಲ್ಲಿ<br>(2) ಎನ್‌ಇಟಿ/ಕೆ-ಸೆಟ್/ಎಸ್‌ಎಲ್‌ಇಟಿ ವಿದ್ಯಾರ್ಹತೆ ಪಡೆದಿದ್ದಲ್ಲಿ<br>(3) ಎಂ.ಫಿಲ್. ವಿದ್ಯಾರ್ಹತೆ ಪಡೆದಿದ್ದಲ್ಲಿ | 15<br>12<br>08 |
| 3) | ಹಿಂದಿನ ವರ್ಷಗಳಲ್ಲಿ ಸರ್ಕಾರಿ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಅವಧಿಗೆ ಪ್ರತಿ ಶೈಕ್ಷಣಿಕ ವರ್ಷಕ್ಕೆ 3 ಅಂಕಗಳಂತೆ ಗರಿಷ್ಠ 10 ವರ್ಷಗಳಿಗೆ 30 ಅಂಕಗಳನ್ನು ಮಿತಿಗೊಳಿಸುವುದು.<br>(ಪ್ರತಿ ಶೈಕ್ಷಣಿಕ ವರ್ಷದ ಪೂರ್ಣ ಅವಧಿ ಸೇವೆಗೆ 3 ಅಂಕಗಳು, ಶೈಕ್ಷಣಿಕ ವರ್ಷದಲ್ಲಿ 1 ಸೆಮಿಸ್ಟರ್‌ನಲ್ಲಿ ಮಾತ್ರ ಸೇವೆ ಸಲ್ಲಿಸಿದ್ದರೆ 1.5 ಅಂಕಗಳು) | 30 |
| | **ಒಟ್ಟು** | **100** |

**ಸೂಚನೆ:** ವಿಕಲಚೇತನ ಅಭ್ಯರ್ಥಿಗಳಿಗೆ 10 ಅಂಕಗಳನ್ನು ಹೆಚ್ಚುವರಿಯಾಗಿ ನೀಡುವುದರೊಂದಿಗೆ ಅವರನ್ನು ಆಯ್ಕೆ ಸಂದರ್ಭದಲ್ಲಿ ಆದ್ಯತೆ ಮೇರೆಗೆ ಪರಿಗಣಿಸುವುದು.

(2) ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡುವ ಸಂದರ್ಭದಲ್ಲಿ ಅಭ್ಯರ್ಥಿಗಳು M.Phil/Ph.D ಪದವಿಯನ್ನು ದೂರ ಶಿಕ್ಷಣದ (Distance Education) ಮೂಲಕ ಪಡೆದಿದ್ದಲ್ಲಿ ಅದನ್ನು ದಿನಾಂಕ: 31.05.2017ರ ಯುಜಿಸಿ ಪ್ರಕಟಣೆ ಸಂಖ್ಯೆ: ಎಫ್ ನಂ.4-1/2016(ಡಿಇಬಿ/III)ರ ಪ್ರಕಾರ ಪರಿಗಣಿಸತಕ್ಕದಲ್ಲ ಹಾಗೂ ನಕಲಿ ಅಂಕಪಟ್ಟಿ ಹಾಗೂ ಪ್ರಮಾಣ ಪತ್ರಗಳನ್ನು ಆಯ್ಕೆಗೆ ಪರಿಗಣಿಸುವಂತಿಲ್ಲ.

(3) ಒಂದು ವೇಳೆ ಅತಿಥಿ ಉಪನ್ಯಾಸಕರು ಪಡೆದಿರುವ ವಿದ್ಯಾರ್ಹತೆಯ ಅಂಕಪಟ್ಟಿಗಳು/ಪ್ರಮಾಣ ಪತ್ರಗಳು ನಕಲಿ ಎಂದು ಕಂಡುಬಂದಲ್ಲಿ ಅಂತಹವರ ವಿರುದ್ಧ ಸಂಬಂಧಪಟ್ಟ ಪ್ರಾಂಶುಪಾಲರು ಕ್ರಿಮಿನಲ್ ಕೇಸ್ ದಾಖಲಿಸುವಂತೆ ಹಾಗೂ ಅತಿಥಿ ಉಪನ್ಯಾಸಕರ ಶೈಕ್ಷಣಿಕ ದಾಖಲೆಗಳು ನಕಲಿ ಎಂದು ಕಂಡುಬಂದಲ್ಲಿ ಅವರ ವಿರುದ್ಧ ಶಿಸ್ತು ಕ್ರಮಕೈಗೊಳ್ಳಬಹುದೆಂದು ಅವರಿಂದ ಆಯ್ಕೆ ವೇಳೆ ರೂ.50/-ಗಳ ಛಾಪಾ ಕಾಗದದ ಮೇಲೆ ಮುಚ್ಚಳಿಕೆ ಪತ್ರ ಬರೆಸಿಕೊಳ್ಳುವಂತೆಯೂ ಪ್ರಾಂಶುಪಾಲರಿಗೆ ಸೂಚಿಸಲಾಗಿದೆ.